All India Radio: Bangalore
National Bulletin In Kannada
04.04.2026  19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮಧ್ಯಪೂರ್ವ ರಾಷ್ಟ್ರಗಳಲ್ಲಿ ಇರುವ ಭಾರತೀಯರ ಸುರಕ್ಷತೆಗೆ ಸರ್ಕಾರದ ಆದ್ಯ ಗಮನ- ಪ್ರಧಾನಿ ನರೇಂದ್ರ ಮೋದಿ

೨. ವಿಧಾನಸಭಾ ಚುನಾವಣೆ; ವಿವಿಧ ರಾಜಕೀಯ ಪಕ್ಷಗಳಿಂದ ಭರದ ಪ್ರಚಾರ; ಪ್ರಧಾನಿ ನರೇಂದ್ರ ಮೋದಿ, ವಿಪಕ್ಷ ನಾಯಕ ರಾಹುಲ್ ಗಾಂಧಿ ಸೇರಿದಂತೆ ಹಲವು ಧುರೀಣರಿಂದ ಅಭ್ಯರ್ಥಿಗಳ ಪರ ಮತಯಾಚನೆ

೩. ವಿಕಸಿತ ಭಾರತದೆಡೆಗಿನ ಪಯಣದಲ್ಲಿ ಶಿಕ್ಷಣಕ್ಕೆ ಮಹತ್ವದ ಪಾತ್ರ- ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್

೪. ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಲಭ್ಯತೆ ಖಾತರಿಪಡಿಸಲು ಕೇಂದ್ರ ಸರ್ಕಾರದಿಂದ ಎಲ್ಲಾ ಪಯತ್ನ

೫. ಐಪಿಎಲ್ ಟಿ-೨೦ ಕ್ರಿಕೆಟ್; ದಿನದ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿಕ್ಯಾಪಿಟಲ್ಸ್‌ಗೆ ೬ ವಿಕೆಟ್‌ಗಳ ಜಯ; ಎರಡನೇ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್; ಬ್ಯಾಟಿಂಗ್ ಆಯ್ಕೆ

<>><><*><><<>

ಮಧ್ಯಪೂರ್ವ ರಾಷ್ಟ್ರಗಳಲ್ಲಿ ಇರುವ ಭಾರತೀಯರ ಸುರಕ್ಷತೆ ಸರ್ಕಾರದ ಆದ್ಯತೆಯಾಗಿದೆ ಎಂದು ಹಿರಿಯ ಬಿಜೆಪಿ ಧುರೀಣ ಮತ್ತು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅವರು ತಿರುವಳ್ಳದಲ್ಲಿ ಇಂದು ಎನ್‌ಡಿಎ ಚುನಾವಣಾ ಪ್ರಚಾರದ ಅಂಗವಾಗಿ ಆಯೋಜಿಸಿದ್ದ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಕೊಲ್ಲಿ ರಾಷ್ಟ್ರಗಳಲ್ಲಿರುವ ಕೇರಳಂ ಜನರ ಭದ್ರತೆಗೆ ಸರ್ಕಾರ ಕ್ರಮ ವಹಿಸಿದೆ ಎಂದು ಹೇಳಿದರು. ಕೊಲ್ಲಿ ರಾಷ್ಟ್ರಗಳೊಡನೆ ಭಾರತಕ್ಕೆ ಇರುವ ಬಲಿಷ್ಠವಾದ ಸಂಬಂಧ ಹಾಗೂ ಒಪ್ಪಂದಗಳು ಈ ಕಠಿಣ ಸಂದರ್ಭದಲ್ಲಿ ಅಲ್ಲಿರುವ ಭಾರತೀಯರನ್ನು ಸಂರಕ್ಷಿಸಲು ನೆರವಾಗಿದೆ ಎಂದರು. ಕೇರಳಂದ ಜನತೆಗೆ ಎನ್‌ಡಿಎ ಮೇಲೆ ಅಪಾರ ವಿಶ್ವಾಸವಿದ್ದು, ಐತಿಹಾಸಿಕ ಮಾರ್ಪಾಡಿಗೆ ಜನರು ಸಿದ್ಧರಾಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಎನ್‌ಡಿಎಗೆ ಮಹಿಳಾ ಸಶಕ್ತೀಕರಣ ಆದ್ಯತೆ ವಿಚಾರವಾಗಿದ್ದು, ಸರ್ಕಾರ ತಂದಿರುವ ಅನೇಕ ನೀತಿಗಳಿಂದ ಮಹಿಳೆಯರು ಪ್ರಯೋಜನ ಪಡೆದಿದ್ದಾರೆ ಎಂದು ಅವರು ಹೇಳಿದರು. ಎಲ್‌ಡಿಎಫ್ ಮತ್ತು ಯುಡಿಎಫ್ ಪಕ್ಷಗಳು

ಅನೇಕ ವರ್ಷಗಳಿಂದ ಕೇರಳಂ ರಾಜ್ಯವನ್ನು ಅಲಕ್ಷಿಸಿವೆ ಎಂದು ಟೀಕಿಸಿದ ಪ್ರಧಾನಿ ನರೇಂದ್ರ ಮೋದಿ, ತಮ್ಮ ಸರ್ಕಾರ ಹಿಂದಿನ ಅವಧಿಗೆ ಹೋಲಿಸಿದಲ್ಲಿ ಕೇರಳಂಗೆ ಐದು ಪಟ್ಟು ಹೆಚ್ಚು ನಿಧಿ ಒದಗಿಸಿದೆ ಎಂದರು. ನಂತರ ಪ್ರಧಾನಿ ಅವರು, ತಿರುವನಂತಪುರನಲ್ಲಿ ಚುನಾವಣಾ ಪ್ರಚಾರದ ಅಂಗವಾಗಿ ರೋಡ್ ಶೋ ನಡೆಸಲಿದ್ದಾರೆ.

<>><><*><><<>

ಹಿರಿಯ ಕಾಂಗ್ರೆಸ್ ಧುರೀಣ ಹಾಗೂ ಲೋಕಸಭೆಯಲ್ಲಿನ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕೇರಳದ ಅಲಪ್ಪುಳದಲ್ಲಿಂದು ಚುನಾವಣಾ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕೇರಳಂದಲ್ಲಿ ನಿಜವಾದ ಬದಲಾವಣೆ ತರಲು ಯುಡಿಎಫ್ ಸಿದ್ಧವಾಗಿದೆ ಎಂದು ಹೇಳಿದರು. ಎನ್‌ಡಿಎ ಹಾಗೂ ಎಲ್‌ಡಿಎಫ್ ಪಕ್ಷಗಳನ್ನು ಟೀಕಿಸಿದ ಅವರು, ವಿಧಾನಸಭಾ ಚುನಾವಣೆ ನಂತರ ಎಲ್‌ಡಿಎಫ್ ತನ್ನ ಪ್ರಾಮುಖ್ಯತೆಯನ್ನು ಕಳೆದುಕೊಳ್ಳಲಿದೆ ಎಂದರು ರಾಹಲ್ ಗಾಂಧಿ ಅವರು, ಇಡುಕ್ಕಿ ಹಾಗೂ ಎರ್ನಾಕುಲಂ ಜಿಲ್ಲೆಗಳಿಲ್ಲಿಯೂ ಸಹ ಯುಡಿಎಫ್ ಪರ ಮತಯಾಚನೆ ನಡೆಸಿದರು. ಸಿಪಿಐಎಂ ಪ್ರಧಾನ ಕಾರ್ಯದರ್ಶಿ ಎಂ.ಎ.ಬೇಬಿ ಮತ್ತು ಪಾಲಿಟ್ ಬ್ಯೂರೊ ಸದಸ್ಯರಾದ ಸುಭಾಷಿನಿ ಅಲಿ, ಯುಡಿಎಫ್ ಪರವಾಗಿ ವಿವಿಧ ಕ್ಷೇತ್ರಗಳಲ್ಲಿ ಪ್ರಚಾ ನಡೆಸಿದರು. ಕೇರಳಂನಲ್ಲಿ ಮಂಗಳವಾರ ಸಾರ್ವಜನಿಕ ಚುನಾವಣಾ ಪ್ರಚಾರ ಕೊನೆಗೊಳ್ಳಲಿದ್ದು, ಈ ಹಿನ್ನೆಲೆಯಲ್ಲಿ  ವಿವಿಧ ರಾಜಕೀಯ ಪಕ್ಷಗಳ ನಾಯಕರು ಭರದ ಪ್ರಚಾರ ನಡೆಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೋಯಿಕೋಡ್, ಎರ್ನಾಕುಲಂ ಮತ್ತು ತಿರುವನಂತಪುರಂ ಜಿಲ್ಲೆಗಳಲ್ಲಿ ನಾಳೆ ಎನ್‌ಡಿಎ ಅಭ್ಯರ್ಥಿಗಳ ಪರ ಮತಯಾಚನೆ ಮಾಡಲಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೊಲ್ಲಂ ಜಿಲ್ಲೆಯಲ್ಲಿ ನಾಳೆ ಯುಡಿಎಫ್ ಪರ ಚುನಾವಣಾ ಪ್ರಚಾರ ಕೈಗೊಳ್ಳಲಿದ್ದಾರೆ.

<>><><*><><<>

ವಿಧಾನಸಭೆ ಚುನಾವಣೆ ನಡೆಯುತ್ತಿರುವ ಕ್ಷೇತ್ರಗಳಲ್ಲಿನ ಅಭ್ಯರ್ಥಿಗಳ ವಿವರಗಳನ್ನು ಮತದಾರರು ಇಸಿಐಎನ್‌ಇಟಿ ವೇದಿಕೆ ಮೂಲಕ ಪಡೆಯಬಹುದಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಅಭ್ಯರ್ಥಿಗಳು ಸಲ್ಲಿಸಿದ ಸಂಪೂರ್ಣ ಅಫಿಡವಿಟ್‌ಗಳನ್ನು ಕೂಡ ಡೌನ್‌ಲೋಡ್ ಮಾಡಬಹುದಾಗಿದೆ ಎಂದು ಆಯೋಗ ತಿಳಿಸಿದೆ. ಚುನಾವಣಾ ಆಯೋಗ ಪಶ್ಚಿಮ ಬಂಗಾಳದಲ್ಲಿ ೪ ಸಾವಿರದ ೬೬೦ ಪೂರಕ ಮತಗಟ್ಟೆಗಳನ್ನು ಸ್ಥಾಪಿಸಲು ಅನುಮೋದನೆ ನೀಡಿದೆ. ಮತದಾರರಿಗೆ ಅನುಕೂಲವಾಗುವಂತೆ ೧೨೧ ಮತಗಟ್ಟೆಗಳನ್ನು ಸ್ಥಳಾಂತರಿಸಲು ಕೂಡ ಆಯೋಗ ಒಪ್ಪಿಗೆ ನೀಡಿದೆ.

<>><><*><><<>

ದೇಶವನ್ನು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವ ವಿಕಸಿತ ಭಾರತದೆಡೆಗಿನ ಪಯಣದಲ್ಲಿ ಶಿಕ್ಷಣ ಮಹತ್ವದ ಪಾತ್ರ ವಹಿಸುತ್ತದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಅವರು, ಬಿಹಾರದ ಮೋತಿಹಾರಿಯಲ್ಲಿ ಮಹಾತ್ಮ ಗಾಂಧಿ ಕೇಂದ್ರೀಯ ವಿಶ್ವವಿದ್ಯಾಲಯದ ಮೂರನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡುತ್ತಿದ್ದರು. ದೇಶ ಎದುರಿಸುತ್ತಿರುವ ಸಮಸ್ಯೆಗಳನ್ನು ಎದುರಿಸುವಲ್ಲಿ ವಿದ್ಯಾರ್ಥಿಗಳು ತಮ್ಮ ಜ್ಞಾನದ ಬಳಕೆ ಮಾಡಬೇಕು. ಪ್ರಸ್ತುತ ಸಮಯ ಅಮೃತ ಕಾಲವಾಗಿದೆ. ಯುವ ಶಕ್ತಿಯೇ ದೇಶವನ್ನು ಮುನ್ನಡೆಸುವ ಶಕ್ತಿಯಾಗಿದೆ

ಎಂದು ಹೇಳಿದರು. ಯುವ ಜನತೆ ಗಾಂಧೀಜಿಯವರ ಸತ್ಯ, ಅಹಿಂಸೆ, ಸ್ವಾವಲಂಬನೆ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ ನೀಡಿದರು.

<>><><*><><<>

ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಲಭ್ಯತೆ ಖಾತರಿಪಡಿಸಲು ಕೇಂದ್ರ ಸರ್ಕಾರ ಸರ್ವ ಪಯತ್ನ ಮಾಡುತ್ತಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ಎಲ್ಲಾ ತೈಲ ಶುದ್ಧೀಕರಣ ಘಟಕಗಳು ಗರಿಷ್ಠ ಸಾಮರ್ಥ್ಯದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ನಾಗರಿಕರು, ಪೆಟ್ರೋಲ್ ಮತ್ತು ಡೀಸೆಲ್‌ಗಳ ಆತಂಕದ ಖರೀದಿಗೆ ಮುಂದಾಗಬಾರದು ಹಾಗೂ ಅನಾವಶ್ಯಕವಾಗಿ ಎಲ್‌ಪಿಜಿ ಬುಕ್ಕಿಂಗ್ ಮಾಡಬಾರದು ಎಂದು ಮನವಿ ಮಾಡಿದೆ. ಪೆಟ್ರೋಲಿಯಂ ಉತ್ಪನ್ನ ಹಾಗೂ ಅನಿರ್ಬಂಧಿತ ಲಭ್ಯತೆಗಾಗಿ ಎಲ್ಲಾ ಸಕಾರಾತ್ಮಕ ಕ್ರಮ ಕೈಗೊಂಡಿದೆ. ಐದು ಕೆಜಿ ಸಿಲಿಂಡರ್‌ಗಳನ್ನು ಯಾವುದೇ ಮನ್ನಣೆ ಪಡೆದ ಗುರುತಿನ ಚೀಟಿ ತೋರಿಸುವ ಮೂಲಕ ಹತ್ತಿರದ ಎಲ್‌ಪಿಜಿ ವಿತರಕರಿಂದ ಖರೀದಿಸಬಹುದಾಗಿದೆ, ಐದು ಕೆಜಿ ಸಿಲಿಂಡರ್ ಖರೀದಿಗೆ ಯಾವುದೇ ವಿಳಾಸದ ಸಾಕ್ಷ್ಯ ಅಗತ್ಯವಿರುವುದಿಲ್ಲ ಎಂದು ಸಚಿವಾಲಯ ತಿಳಿಸಿದೆ. ಕಳೆದ ತಿಂಗಳ ೨೩ರ ನಂತರ ಐದು ಕಿಲೋಗ್ರಾಂ ತೂಕದ ಸುಮಾರು ಐದು ಲಕ್ಷ ೬೦ ಸಾವಿರ ಸಿಲಿಂಡರ್‌ಗಳನ್ನು ಮಾರಾಟ ಮಾಡಲಾಗಿದೆ. ಆನ್‌ಲೈನ್ ಎಲ್‌ಪಿಜಿ ಸಿಲಿಂಡರ್ ಬುಕ್ಕಿಂಗ್ ಶೇಕಡಾ ೯೫ಕ್ಕೆ ಹೆಚ್ಚಿದ್ದು, ನಿನ್ನೆ ೫೦ ಲಕ್ಷ ಗೃಹ ಬಳಕ ಎಲ್‌ಪಿಜಿ ಸಿಲೆಂಡರ್ ಅನ್ನು ಪೂರೈಸಲಾಗಿದೆ ಎಂದು ಸಚಿವಾಲಯ ಮಾಹಿತಿ ನೀಡಿದೆ. ನಾಗರಿಕರು ಪಿಎನ್‌ಜಿ, ಇಂಡಕ್ಷನ್ ಅಥವಾ ವಿದ್ಯುತ್ ಒಲೆಗಳನ್ನು ಬಳಸುವಂತೆ ತಿಳಿಸಲಾಗಿದೆ. ಕಳೆದ ಒಂದು ತಿಂಗಳಿನಿಂದ ಈಚೆಗೆ ಮೂರುವರೆ ಲಕ್ಷಕ್ಕೂ ಅಧಿಕ ಪಿಎನ್‌ಜಿ ಸಂಪರ್ಕಗಳನ್ನು ಕಲ್ಪಿಸಲಾಗಿದೆ. ೩ ಲಕ್ಷ ೮೦ ಸಾವಿರಕ್ಕೂ ಅಧಿಕ ಗ್ರಾಹಕರು ಹೊಸ ಸಂಪರ್ಕಕ್ಕಾಗಿ ನೊಂದಣಿ ಮಾಡಿಸಿಕೊಂಡಿದ್ದಾರೆ. ೪೬ ಸಾವಿರದ ೬೫೦ ಮೆಟ್ರಿಕ್ ಟನ್ ಎಲ್‌ಪಿಜಿ ಸರಕು ಹೊತ್ತ ಹಾಗೂ ೨೫ ನಾವಿಕರಿರುವ ಗ್ರೀನ್ ಸಾನ್ವಿ ನೌಕೆ ನಿನ್ನೆ ಹರ್ಮುಜ್ ಜಲಸಂಧಿಯನ್ನು ದಾಟಿದೆ. ಇದಲ್ಲದೆ ೧೬ ಭಾರತೀಯ ಧ್ವಜದ ನೌಕೆಗಳು ಪಶ್ಚಿಮ ಪರ್ಶಿಯನ್ ಕೊಲ್ಲಿ ಪ್ರದೇಶದಲ್ಲೇ ಇವೆ. ವಿಮಾನಯಾನ ಕಾರ್ಯಾಚರಣೆ ಸುಧಾರಿಸುತ್ತಿದ್ದು, ಫೆಬ್ರುವರಿ ೨೮ ರ ನಂತರ ಸುಮಾರು ೬ ಲಕ್ಷದ ೬೫ ಸಾವಿರ ಪ್ರಯಾಣಿಕರು ಆಗಮಿಸಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<>><><*><><<>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಇಂದಿನ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ೬ ವಿಕೆಟ್‌ಗಳ ಜಯ ದಾಖಲಿಸಿದೆ. ಮೊದಲು ಬ್ಯಾಟ್ ಮಾಡಿದ ಮುಂಬೈ ಇಂಡಿಯನ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೨ ರನ್‌ಗಳಿಸಿತು. ಇದಕ್ಕೆ ಉತ್ತರವಾಗಿ ಡೆಲ್ಲಿ ಕ್ಯಾಪಿಟಲ್ಸ್ ೧೮.೧ ಓವರ್‌ನಲ್ಲಿ ೪ ವಿಕೆಟ್ ನಷ್ಟಕ್ಕೆ ೧೬೪ ರನ್ ಗಳಿಸಿ ಗೆಲುವು ಸಾಧಿಸಿತು. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂದಿನ ಎರಡನೇ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ಹಾಗೂ ಗುಜರಾತ್ ಟೈಟನ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ ರಾಜಸ್ಥಾನ ರಾಯಲ್ಸ್ ಬ್ಯಾಟಿಂಗ್ ಆಯ್ದುಕೊಂಡಿದೆ.

<>><><*><><<>

ಬ್ಯಾಂಕಾಕ್‌ನಲ್ಲಿ ನಡೆದ ವಿಶ್ವ ಪ್ಯಾರ ಆರ್ಚರಿ ಸ್ಪರ್ಧೆಗಳಲ್ಲಿ ಭಾರತದ ಶ್ಯಾಮ್ ಸುಂದರ್ ಸ್ವಾಮಿ ಕಂಚಿನ ಪದಕ ಗೆದ್ದಿದ್ದಾರೆ. ಕಂಚಿನ ಪದಕಕ್ಕಾಗಿ ನಡೆದ ಸ್ಪರ್ಧೆಯಲ್ಲಿ ಶ್ಯಾಮ್ ಸುಂದರ್ ಸ್ವಾಮಿ ಭಾರತದವರೇ ಆದ ಮತ್ತೊಬ್ಬ ಬಿಲ್ಲುಗಾರಿಕೆ ಕ್ರೀಡಾಪಟು ರಾಕೇಶ್ ಕುಮಾರ್ ಅವರನ್ನು ಪರಾಭವಗೊಳಿಸಿದರು.

<>><><*><><<>

ಇರಾನ್‌ನಿಂದ ಭಾರತೀಯ ಮೀನುಗಾರರನ್ನು ತೆರವುಗೊಳಿಸಲು ನೆರವಾದ ಅರ್ಮೇನಿಯಾ ಸರ್ಕಾರಕ್ಕೆ ಭಾರತ ಕೃತಜ್ಞತೆ ಸೂಚಿಸಿದೆ. ಅರ್ಮೇನಿಯಾ ಮುಖಾಂತರ ಭಾರತೀಯ ಮೀನುಗಾರರನ್ನು ಕರೆ ತರಲು ಸಹಾಯ ಮಾಡಿದ ಅಲ್ಲಿನ ವಿದೇಶಾಂಗ ಸಚಿವ ಅರಾರತ್ ಮಿರ್ಜೋಯಾನ್ ಅವರಿಗೆ ಭಾರತದ ವಿದೇಶಾಂಗ ವ್ಯವಹಾರ ಖಾತೆ ಸಚಿವ ಡಾ.ಎಸ್.ಜೈಶಂಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಧನ್ಯವಾದ ತಿಳಿಸಿದ್ದಾರೆ.

<>><><*><><<>

ಪಶ್ಚಿಮ ಬಂಗಾಳದ ಮಾಲ್ಡಾ ಜಿಲ್ಲೆಯ ಕಾಲಿಯಾಚಾಕ್ ಘಟನೆಗೆ ಸಂಬಂಧಿಸಿದಂತೆ ರಾಷ್ಟ್ರೀಯ ತನಿಖಾ ದಳ-ಎನ್‌ಐಎ, ಇಂದು ಸ್ಥಳಕ್ಕೆ ಭೇಟಿ ನೀಡಿ, ತನಿಖೆ ಆರಂಭಿಸಿದೆ. ನ್ಯಾಯಾಂಗ ಅಧಿಕಾರಿಗಳನ್ನು ಸಂರಕ್ಷಿಸಿದ ಪೈಲೆಟ್ ಕಾರಿನ ಚಾಲಕ ಹಾಗೂ ಘಟನೆ ಸಂದರ್ಭದಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಎನ್‌ಐಎ ಪ್ರಶ್ನಿಸಿದ್ದು, ಅನೇಕ ಶಂಕಿತರನ್ನು ವಶಕ್ಕೆ ತೆಗೆದುಕೊಂಡಿದೆ. ಬುಧವಾರದಂದು ಕಾಲಿಯಾಚಾಕ್ ಬಿಡಿಓ ಕಚೇರಿಯ ಹೊರಗೆ ನ್ಯಾಯಾಂಗ ಅಧಿಕಾರಿಗಳ ಮೇಲೆ ನಡೆಯಿತೆನ್ನಲಾದ ಮುತ್ತಿಗೆ ಹಾಗೂ ಹಿಂಸಾತ್ಮಕ ಘಟನೆ ಬಗ್ಗೆ ಎನ್‌ಐಎ ತನಿಖೆ ನಡೆಸಿದೆ. ಸುಪ್ರೀಂಕೋರ್ಟ್ ಈ ಪ್ರಕರಣವನ್ನು ಸಿಬಿಐ ಅಥವಾ ರಾಷ್ಟ್ರೀಯ ತನಿಖಾ ದಳ-ಎನ್‌ಐಎ,ಗೆ ವಹಿಸುವಂತೆ ಸೂಚಿಸಿತ್ತು. ಸುಪ್ರೀಂಕೋರ್ಟ್ ನಿರ್ದೇಶನ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಈ ಪ್ರಕರಣವನ್ನು ಎನ್‌ಐಎಗೆ ವಹಿಸಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>